ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ
KARNATAK UNIVERSITY DHARWAD
ಪರೀಕ್ಷಾ ವಿಭಾಗ
ಗೌಪ್ಯ ಶಾಖೆ, 2ನೇ ಮಹಡಿ, ಪರೀಕ್ಷಾ ಭವನ
EXAMINATION SECTION
Confidential Branch, 2nd Floor, Examination Bhavan

Azadi Ka Amrit Mahotsav

Website: www.kud.ac.in
e-mail: confidential@kud.ac.in
☎: (0836) 2215259

ದಿನಾಂಕ : 12.08.26

ನಂ.ಕವಿವಿ/ಪರೀಕ್ಷಾ-ಗೌಪ್ಯ/2026/939

## ಸುತ್ತೋಲೆ

**ವಿಷಯ**:- ಸ್ನಾತಕ ಪದವಿಗಳ (NEP/R-NEP) 2, 4, 6 & 8ನೇ ಸೆಮಿಸ್ಟರ್‌ಗಳ ಅವಧಿಗಳಲ್ಲಿ ಎನ್.ಸಿ.ಸಿ. ಕ್ಯಾಂಪ್‌ಗಳಲ್ಲಿ ಭಾಗವಹಿಸಿದ ಕೆಡೆಟ್‌ಗಳಿಗೆ ಪ್ರತ್ಯೇಕ ಸೆಮಿಸ್ಟರ್ ಪ್ರಾಯೋಗಿಕ ಪರೀಕ್ಷೆ ನಡೆಸುವ ಕುರಿತು.

**ಉಲ್ಲೇಖ**:- ಕರ್ನಾಟಕ ಸರಕಾರ ಪತ್ರ ನಂ.ಇಡಿ/37/ರಾಮಸೇ/2018 ದಿ: 27.06.2018.

****

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕವಿವಿ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯದ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಸ್ನಾತಕ ಪದವಿಗಳ (NEP/R-NEP) 2, 4, 6 & 8ನೇ ಸೆಮಿಸ್ಟರ್‌ನ ಪ್ರಾಯೋಗಿಕ ಪರೀಕ್ಷೆಗಳು ದಿನಾಂಕ: 25.05.2026 ರಿಂದ 06.06.2026ರ ವರೆಗೆ ಜರುಗಿದ್ದು ಈ ಪರೀಕ್ಷಾ ಅವಧಿಯಲ್ಲಿ ತಮ್ಮ ಮಹಾವಿದ್ಯಾಲಯಗಳಲ್ಲಿ ಎನ್.ಸಿ.ಸಿ. ಕೆಡೆಟ್‌ಗಳು ರಾಷ್ಟ್ರ ಮಟ್ಟದ ಆರ್.ಡಿ.ಸಿ. ಎಐಟಿಎಸ್‌ಸಿ, ಎಐವಿಎಸ್‌ಸಿ ಮತ್ತಿತರ ಶಿಬಿರಗಳಲ್ಲಿ ಭಾಗವಹಿಸಿದ್ದಲ್ಲಿ ಜೂನ-2026ರ ಪರೀಕ್ಷಾ ದಿನಗಳಂದು ಶಿಬಿರಗಳಲ್ಲಿ ಭಾಗವಹಿಸಿದ ಬಗ್ಗೆ ದೃಢೀಕೃತ ಪ್ರಮಾಣ ಪತ್ರ ನೀಡಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಮಾತ್ರ ಪ್ರಾಯೋಗಿಕ ಪರೀಕ್ಷೆ ನಡೆಸಲು ಕ್ರಮ ಕೈಗೊಳ್ಳಲಾಗುವುದು.

ಆದುದರಿಂದ ವಿದ್ಯಾರ್ಥಿಗಳು ಮೇಲ್ಕಂಡ ಪರೀಕ್ಷಾ ದಿನಗಳಂದು ಎನ್.ಸಿ.ಸಿ. ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ದೃಢೀಕೃತ ಪ್ರಮಾಣ ಪತ್ರ (Attendance Certificate) ವನ್ನು ವಿದ್ಯಾರ್ಥಿಯ ಹಾಲ್ ಟಿಕೇಟಿನ ಝರಾಕ್ಸ್ ಪ್ರತಿಯೊಂದಿಗೆ ದಿನಾಂಕ:14.08.2026 ರ ಒಳಗಾಗಿ ಮಹಾವಿದ್ಯಾಲಯದ ಪ್ರಾಚಾರ್ಯರು ಸಲ್ಲಿಸಲು ಸೂಚಿಸಲಾಗಿದೆ. ಸದರಿ ಮಾಹಿತಿಯನ್ನು ತಮ್ಮ ಮಹಾವಿದ್ಯಾಲಯಗಳಲ್ಲಿ ಓದುತ್ತಿರುವ ಸಂಬಂಧಿತ ವಿದ್ಯಾರ್ಥಿಗಳ ಗಮನಕ್ಕೆ ತರವುದು.

ಕುಲಸಚಿವರು(ಮೌಲ್ಯಮಾಪನ)

ಗೆ,
ಕವಿವಿ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ.

**ಪ್ರತಿ ಮಾಹಿತಿಗಾಗಿ** :

1. ಸಿಸ್ಟಮ್ ಅನಾಲಿಸ್ಟ್, ಪರೀಕ್ಷಾ ಗಣಕಯಂತ್ರ ವಿಭಾಗ, ಕವಿವಿ, ಧಾರವಾಡ.
2. ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ವಿಭಾಗ, ಕವಿವಿ, ಧಾರವಾಡ (ಸುತ್ತೋಲೆಯನ್ನು ಅಂತರ್ಜಾಲದಲ್ಲಿ ಪ್ರಕಟಿಸುವುದು)
3. ಉಪಕುಲಸಚಿವರು/ಸಹಾಯಕ ಕುಲಸಚಿವರುವಿದ್ಯಾಮಂಡಳ/ಪರೀಕ್ಷಾ/ ಹಣಕಾಸು ವಿಭಾಗ/ ಕವಿವಿ, ಧಾರವಾಡ.
4. ಮಾನ್ಯಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌಲ್ಯಮಾಪನ)/ವಿತ್ತಾಧಿಕಾರಿಗಳ ಆಪ್ತಕಾರ್ಯದರ್ಶಿಗಳು ಕವಿವಿ, ಧಾರವಾಡ.
5. ಎಲ್ಲ ಅಧೀಕ್ಷಕರು, ಪರೀಕ್ಷಾ ವಿಭಾಗ, ಕವಿವಿ, ಧಾರವಾಡ.